# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 412 |
| ಸದಸ್ಯರ ಹೆಸರು | : | ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಸಣ್ಣ ಕೈಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 12.12.2018. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಪ್ರದೇಶದಲ್ಲಿ ನಿರುದ್ಯೋಗ ನಿವಾರಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಗ್ರಾಮೀಣ ಪ್ರದೇಶದಲ್ಲಿ ನಿರುದ್ಯೋಗ ನಿವಾರಣೆಗಾಗಿ ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.<br><br>**ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನಾ ಯೋಜನೆ (ಪಿ.ಎಂ.ಇ.ಜಿ.ಪಿ)**<br><br>ಕೈಗಾರಿಕೆಗಳನ್ನು ಸ್ಥಾಪಿಸಲು ಉದ್ದೇಶಿಸಿರುವ ಉದ್ಯಮಶೀಲರಿಗೆ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನಾ ಯೋಜನೆ (ಪಿ.ಎಂ.ಇ.ಜಿ.ಪಿ) ಯೋಜನೆಯು 2008-09 ನೇ ಸಾಲಿನಿಂದ ಜಾರಿಯಲ್ಲಿರುತ್ತದೆ. ಈ ಯೋಜನೆಯನ್ನು ಖಾದಿ ಮತ್ತು ಗ್ರಾಮೋದ್ಯೋಗ ಆಯೋಗ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮತ್ತು ಜಿಲ್ಲಾ ಕೈಗಾರಿಕಾ ಕೇಂದ್ರಗಳ ವತಿಯಿಂದ ಅನುಷ್ಠಾನ ಮಾಡಲಾಗುತ್ತಿದೆ.<br><br>ಸದರಿ ಯೋಜನೆಯಲ್ಲಿ ವಿದ್ಯಾವಂತ ನಿರುದ್ಯೋಗಿಗಳಿಗೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು, ಉದ್ಯೋಗವಕಾಶ ಕಲ್ಪಿಸುವ ದೃಷ್ಟಿಯಿಂದ, ಉತ್ಪಾದನೆ ಚಟುವಟಿಕೆಗೆ ರೂ.25 ಲಕ್ಷಗಳ ಯೋಜನಾ ವೆಚ್ಚದವರೆಗೂ ಮತ್ತು ಸೇವಾ ಚಟುವಟಿಕೆಗೆ ರೂ.10 ಲಕ್ಷಗಳ ಯೋಜನಾ ವೆಚ್ಚದವರೆಗೂ ಬ್ಯಾಂಕ್ ಮುಖಾಂತರ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.<br><br>ಸರ್ಕಾರದಿಂದ ಈ ಕೆಳಗಿನಂತೆ ಸಹಾಯಧನವನ್ನು ನೀಡಲಾಗುತ್ತದೆ. |

| ವರ್ಗ | ನಗರ | ಗ್ರಾಮೀಣ |
|---|---|---|
| ಸಾಮಾನ್ಯ ವರ್ಗದವರಿಗೆ | 15% (ಗರಿಷ್ಠ ರೂ. 3.75 ಲಕ್ಷ) | 25% (ಗರಿಷ್ಠ ರೂ. 6.25 ಲಕ್ಷ) |
| ಪ.ಜಾ, ಪ.ಪಂ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ, ಮಾಜಿ ಸೈನಿಕ, ಅಂಗವಿಕಲ, ಮಹಿಳೆ | 25% (ಗರಿಷ್ಠ ರೂ. 6.25 ಲಕ್ಷ) | 35% (ಗರಿಷ್ಠ ರೂ. 8.75 ಲಕ್ಷ) |

<table>
<tr><td></td><td></td><td>
ಮುಖ್ಯ ಮಂತ್ರಿಗಳ ಸ್ವಯಂ ಉದ್ಯೋಗ ಸೃಜನಾ ಯೋಜನೆ (ಸಿಎಂಇಜಿಪಿ)<br>
2015–16ನೇ ಸಾಲಿನಿಂದ ಮುಖ್ಯಮಂತ್ರಿಗಳ ಸ್ವಯಂ ಉದ್ಯೋಗ ಸೃಜನ ಯೋಜನೆಯನ್ನು ಜಾರಿಗೆ ತರಲಾಗಿದ್ದು, ಜಿಲ್ಲಾ ಕೈಗಾರಿಕಾ ಕೇಂದ್ರಗಳು ಮತ್ತು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ವತಿಯಿಂದ ಅನುಷ್ಠಾನ ಮಾಡಲಾಗುತ್ತಿದೆ.<br><br>
ಈ ಯೋಜನೆಯಡಿಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಪ್ರತಿ ಘಟಕಕ್ಕೆ ಗರಿಷ್ಠ ರೂ.10.00 ಲಕ್ಷದಂತೆ, ಉತ್ಪಾದನಾ/ಸೇವಾ ಘಟಕಗಳನ್ನು ಸ್ಥಾಪಿಸಲು ಬ್ಯಾಂಕ್ ಮುಖಾಂತರ ಸಾಲ ಸೌಲಭ್ಯ ಒದಗಿಸಲಾಗುತ್ತಿದ್ದು, ಸ್ವಯಂ ಉದ್ಯೋಗಕ್ಕೆ ಪ್ರೇರಣೆ ನೀಡಲಾಗುತ್ತಿದೆ.<br><br>
ಸರ್ಕಾರದಿಂದ ಈ ಕೆಳಗಿನಂತೆ ಸಹಾಯಧನವನ್ನು ನೀಡಲಾಗುತ್ತದೆ.
<table>
<tr><th>ವರ್ಗ</th><th>ನಗರ</th><th>ಗ್ರಾಮೀಣ</th></tr>
<tr><td>ಸಾಮಾನ್ಯ ವರ್ಗದವರಿಗೆ</td><td>–</td><td>ಶೇ. 25 (ಗರಿಷ್ಠ ರೂ. 2.50 ಲಕ್ಷ)</td></tr>
<tr><td>ಪ.ಜಾ, ಪ.ಪಂ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ, ಮಾಜಿ ಸೈನಿಕ, ಅಂಗವಿಕಲ, ಮಹಿಳೆ</td><td>–</td><td>ಶೇ. 35 (ಗರಿಷ್ಠ ರೂ. 3.50 ಲಕ್ಷ)</td></tr>
</table>
</td></tr>
<tr><td>ಆ)</td><td>ಗ್ರಾಮೀಣ ಪ್ರದೇಶದ ಕೃಷಿ ಭೂಮಿಯಲ್ಲಿ ಸಣ್ಣ ಮತ್ತು ಅತೀಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳಿವೆಯೇ;</td><td>ಗ್ರಾಮೀಣ ಪ್ರದೇಶದ ಕೃಷಿ ಭೂಮಿಯಲ್ಲಿ ಸಣ್ಣ ಮತ್ತು ಅತೀಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳೀದ್ದು, ಭೂಪರಿವರ್ತನೆ ಮಾಡುವುದು ಅವಶ್ಯವಿರುತ್ತದೆ.</td></tr>
<tr><td>ಇ)</td><td>ಇಲ್ಲದೇ ಇದ್ದಲ್ಲಿ, ಗ್ರಾಮೀಣ ಪ್ರದೇಶದಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಸರ್ಕಾರ ಸಣ್ಣ ಕೈಗಾರಿಕೆಗಳಿಗಾಗಿ ಭೂ ಪರಿವರ್ತನೆಯಿಂದ ವಿನಾಯಿತಿ ನೀಡಲು ಉದ್ದೇಶಿಸಿದೆಯೇ;</td><td>ಕರ್ನಾಟಕ ಸರ್ಕಾರ 2014–19ರ ಕೈಗಾರಿಕಾ ನೀತಿಯನ್ವಯ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಇಚ್ಛಿಸುವ ಉದ್ಯಮಿಗಳಿಗೆ. ಕೃಷಿ ಭೂಮಿಯನ್ನು ಕೃಷಿಯೇತರ ಚಟುವಟಿಕೆಗಳಿಗಾಗಿ ಭೂ ಪರಿವರ್ತನಾ ಶುಲ್ಕ ಮರುಪಾವತಿ ಸೌಲಭ್ಯವನ್ನು ಕೆಳಕಂಡಂತೆ ನೀಡಲಾಗುವುದು.<br><br>
1) ಹೈದ್ರಾಬಾದ್ ಕರ್ನಾಟಕ ಪ್ರದೇಶ ಹೊರತುಪಡಿಸಿ<br>
ಅ) ವಲಯ 1,2 – ಶೇಕಡ 100<br>
ಆ) ವಲಯ 3 – ಶೇಕಡ 75<br>
ಇ) ವಲಯ 4 – Nil.<br><br>
2) ಹೈದ್ರಾಬಾದ್ ಕರ್ನಾಟಕ ಪ್ರದೇಶ<br><br>
ವಲಯ 1 ಮತ್ತು 2 – ಶೇಕಡ 100</td></tr>
</table>

| | | |
|---|---|---|
| ಈ) | ಸಣ್ಣ ಕೈಗಾರಿಕೆಗಳ ಉತ್ತೇಜನಕ್ಕಾಗಿ ವಿದ್ಯುತ್ ಸಂಪರ್ಕ ಮತ್ತು ಇತರೆ ಮೂಲ ಸೌಕರ್ಯಗಳಿಗಾಗಿ ಸರ್ಕಾರದಲ್ಲಿ ಇರುವ ಕಾರ್ಯಕ್ರಮ ಸೌಲಭ್ಯಗಳೇನು? | ಸಣ್ಣ ಕೈಗಾರಿಕೆಗಳ ಉತ್ತೇಜನಕ್ಕಾಗಿ ವಿದ್ಯುತ್ ಸಂಪರ್ಕ ಮತ ಮೂಲಸೌಕರ್ಯಗಳು ಒಳಗೊಂಡಂತೆ 2014-19ರ ; ನೀತಿಯ ಪ್ರಕಾರ ಕೆಳಕಂಡ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲಾಗುತ್ತಿದೆ.<br><br>1. ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕ ರಿಯಾಯಿತಿ.<br>2. ಬಂಡವಾಳ ಹೂಡಿಕೆ ಸಹಾಯಧನ<br>3. ಬಡ್ಡಿ ಸಹಾಯಧನ<br>4. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>5. ಪ್ರವೇಶ ತೆರಿಗೆ ವಿನಾಯಿತಿ.<br>6 ರಫ್ತು ಆದಾರಿತ ಘಟಕಗಳಿಗೆ ರಿಯಾಯಿತಿ.<br>7. ಕೃಷಿ ಉತ್ಪನ್ನ ಮಾರುಕಟ್ಟೆ ತೆರಿಗೆಯಿಂದ ವಿನಾಯಿತಿ.<br>8. ತ್ಯಾಜ್ಯ ಸಂಸ್ಕರಣಾ ಯಂತ್ರ ಸ್ಥಾಪನೆಗೆ ಸಹಾಯಧನ.<br>9. ವಿದ್ಯುತ್ ತೆರಿಗೆ ವಿನಾಯಿತಿ<br>10.ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಮತ್ತು ಪೇಟೆಂಟ್ ನೋಂದಣಿ ಸಹಾಯಧನ<br>11. ಮಳೆ ನೀರು ಕೊಯ್ಲು / ಸಂರಕ್ಷಣೆ ಸಹಾಯಧನ<br>12. ಶಕ್ತಿ ಸಂರಕ್ಷಣೆ ಸಹಾಯಧನ<br>13. ಯೋಜನಾ ವರದಿ ತಯಾರಿಕಾ ವೆಚ್ಚ ಮರುಪಾವತಿ<br>14. ಎಸ್‌ಸಿ/ಎಸ್‌ಟಿ ಉದ್ಯಮಶೀಲರಿಗೆ ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನ ಹಂಚಿಕೆ ಮಾಡಲಾಗುವುದು. |

**ಸಿಐ 125 ಸಿಎಸ್‌ಸಿ 2018**

[ಎಸ್.ಆರ್. ಶ್ರೀನಿವಾಸ್ (ವಾಸು)]
**ಸಣ್ಣ ಕೈಗಾರಿಕೆ ಸಚಿವರು**